
# ಸಭಾಪತಿ ಹೊರಟ್ಟಿ ಪ್ರಧಾನ ಲೋಕಸಭಾಧ್ಯಕ್ಷ ಓಂ ಬಿರ್ಲಾ ಅವರಿಗೆ ಮನವಿ



ಬೆಂಗಳೂರು: ನವದೆಹಲಿಯಲ್ಲಿ ನೂತನವಾಗಿ ನಿರ್ಮಿಸುತ್ತಿರುವ ಕೇಂದ್ರ ಸರಕಾರದ ಮಹತ್ವಾಕಾಂಕ್ಷೆಯ ಲೋಕಸಭಾ ನೂತನ ಸಂಕೀರ್ಣದ ಕಟ್ಟಡವೊಂದಕ್ಕೆ "ಅನುಭವ ಮಂಟಪ" ಎಂದು ನಾಮಕರಣ ಮಾಡುವಂತೆ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಲೋಕಸಭಾಧ್ಯಕ್ಷ ಓಂ ಬಿರ್ಲಾ ಅವರಿಗೆ ಅಧ್ಯತಾಪೂರ್ವಕವಾಗಿ ಮನವಿ ಮಾಡಿದ್ದಾರೆ.

ಈ ಕುರಿತು ವಿಧಾನಸೌಧದಲ್ಲಿ ಲೋಕಸಭಾಧ್ಯಕ್ಷ ಓಂ ಬಿರ್ಲಾ ಅವರಿಗೆ ಮನವಿಯೊಂದನ್ನು ಸಲ್ಲಿಸಿರುವ ಸಭಾಪತಿ ಬಸವರಾಜ ಹೊರಟ್ಟಿ 12ನೇ ಶತಮಾನದಲ್ಲಿ ಅಲ್ಲಮಪ್ರಭು ಮತ್ತು ಬಸವಾದಿ ಶರಣರು ನಿರ್ಮಿಸಿದ ಅನುಭವ ಮಂಟಪ ಇಡೀ ವಿಶ್ವದ ಪ್ರಪ್ರಥಮ ಶಾಸನ ಸಭೆ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ಅಸಮಾನತೆಯನ್ನು ತೊಡೆದು ಹಾಕಿ "ಸರ್ವರಿಗೂ ಸಮಪಾಲು ಸರ್ವರಿಗೂ ಸಮಬಾಳು" ಎಂಬ ಸಂದೇಶ ಸಾರುವ ಸಾರ್ವಕಾಲಿಕ ವಿಚಾರಧಾರೆಯ ಅಡಿಯಲ್ಲಿ ನಿರ್ಮಾಣಗೊಂಡಿದ್ದ ಅನುಭವ ಮಂಟಪ ಪ್ರಜಾಪ್ರಭುತ್ವ ಪರಿಕಲ್ಪನೆಗೆ ಮೂಲ ಅಡಿಪಾಯ ಹಾಗೂ ಆಶಯವಾಗಿದೆ. ಶ್ರೇಷ್ಠ ಸಮಾಜ ಸುಧಾರಕ, ದಾರ್ಶನಿಕ ಹಾಗೂ ಅತ್ಯುತ್ತಮ ಆಡಳಿತಗಾರರಾಗಿದ್ದ ಬಸವಣ್ಣನವರು ತಮ್ಮ ವಚನಗಳ ಮೂಲಕ ಸಾಮಾಜಿಕ ಸಬಲೀಕರಣ, ಸೌಹಾರ್ದತೆ, ಸಹೋದರತ್ವ ಹಾಗೂ ಸಮಾನತೆ ಕುರಿತು ಇಡೀ ಸಮಾಜಕ್ಕೆ ಸಂದೇಶ ನೀಡಿದ್ದಾರೆ. ತಮ್ಮ ಜೀವನದುದ್ದಕ್ಕೂ ಸಾಮಾಜಿಕ ಒಳಗೊಳ್ಳುವಿಕೆ ಕುರಿತು ಬೋಧಿಸಿರುವ ಬಸವಣ್ಣನವರು ಲಿಂಗ ಸಮಾನತೆ ಬಗ್ಗೆ 12ನೇ ಶತಮಾನದಲ್ಲಿಯೇ ಕ್ರಾಂತಿಕಾರಿ ಚಳವಳಿ ಮೂಲಕ ಇಡೀ ಮನುಕುಲಕ್ಕೆ ಮಾನವೀಯತೆಯ ಸಂದೇಶ ಸಾರಿದ್ದಾರೆ. ಅಂತಹ ಮಹಾನ್ ಪುರುಷರು ಪ್ರಜಾಪ್ರಭುತ್ವದ ನೆಲಗಟ್ಟಿನಲ್ಲಿ ನಿರ್ಮಿಸಿದ್ದ ಅನುಭವ ಮಂಟಪ ಸರ್ವ ಜಾತಿ, ಜನಾಂಗ ಸಮುದಾಯ ಹಾಗೂ ಲಿಂಗಗಳಿಗೆ ಪ್ರಾತಿನಿಧ್ಯ ನೀಡಿ ಪ್ರಜಾಸತ್ತಾತ್ಮಕ ಮೌಲ್ಯಗಳ ವರ್ಧನೆಯ ಬೀಜಾಂಕುರ ಮಾಡಿದ್ದಾರೆ. ಬಸವಾದಿ ಶರಣರು ರಚಿಸಿರುವ ಅಸಂಖ್ಯಾತ ವಚನಗಳೇ ಇಂದಿನ ಸಂವಿಧಾನದ ಅನುಚ್ಛೇದಗಳಾಗಿ ರೂಪುಗೊಂಡಿರುವುದು ಹೆಮ್ಮೆಯ ವಿಷಯವಾಗಿದೆ ಎಂದು ಬಸವರಾಜ ಹೊರಟ್ಟಿ ತಿಳಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಇಡೀ ಜಗತ್ತಿಗೇ ಮಾನವೀಯತೆಯ ಹಾಗೂ ಪ್ರಜಾಸತ್ತಾತ್ಮಕ ಸಂದೇಶ ಸಾರುವ ಅನುಭವ ಮಂಟಪದ ಹೆಸರನ್ನು ಕೇಂದ್ರ ಸರಕಾರದ ಮಹತ್ವಾಕಾಂಕ್ಷೆಯ ನೂತನ ಲೋಕಸಭಾ ಸಂಕೀರ್ಣದ ಕಟ್ಟಡವೊಂದಕ್ಕೆ ನಾಮಕರಣ ಮಾಡುವ ಮೂಲಕ ಕಾಯಕವೇ ಕೈಲಾಸವೆಂದು ಇಡೀ ಜಗತ್ತಿಗೆ ಕಾಯಕನಿಷ್ಠೆಯ ಗೌರವ ಹೆಚ್ಚಿಸಿರುವ ಮಹಾತ್ಮಾ ಬಸವೇಶ್ವರರ ಹೆಸರನ್ನು ಅಜರಾಮರವಾಗಿಸುವ ಮೂಲಕ ಮುಂದಿನ ಪೀಳಿಗೆಗೆ ಜ್ಞಾನದಾಸೋಹಕ್ಕೆ ದೃಢ ಸಂಕಲ್ಪ ಕೈಗೊಳ್ಳಲು ತಾವು ಮುಂದಡಿ ಇಡಬೇಕೆಂದು ಕೋರುವುದಾಗಿ ಸಭಾಪತಿ ಬಸವರಾಜ ಹೊರಟ್ಟಿ ಮನವಿ ಮಾಡಿದ್ದಾರೆ.

# ಮಾಜಿ ಸಿಎಂ ಬಿಎಸ್‌ವೈ ಅತ್ಯುತ್ತಮ ಶಾಸಕ



**ಬೆಂಗಳೂರು:** ಬಿಜೆಪಿ ಹಿರಿಯ ನಾಯಕ ಮತ್ತು ಶಿಕಾರಿಪುರ ಶಾಸಕ ಬಿ.ಎಸ್. ಯಡಿಯೂರಪ್ಪ ಅವರು ಅತ್ಯುತ್ತಮ ಶಾಸಕ ಪ್ರಶಸ್ತಿಗೆ ಪಾತ್ರರಾಗಿದ್ದಾರೆ. ಇದೇ ಮೊದಲ ಬಾರಿಗೆ ಈ ಪ್ರಶಸ್ತಿ ಯನ್ನು ನೀಡಲಾಗುತ್ತಿದ್ದು, 2020-21 ನೇ ಸಾಲಿನ ಚೊಚ್ಚಲ ಪ್ರಶಸ್ತಿ ಯಡಿಯೂರಪ್ಪ ಅವರಿಗೆ ಲಭಿಸಿದೆ.

ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಮತ್ತು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರ ಸಮ್ಮುಖ ದಲ್ಲಿ ವಿಧಾನಸಭೆ ಜಂಟಿ ಅಧಿವೇಶನದಲ್ಲಿ ವಿಧಾನಸಭಾ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಪ್ರಶಸ್ತಿ ಘೋಷಣೆ ಮಾಡಿದರು.

ಸ್ಪೀಕರ್ ಕಾಗೇರಿ ನೇತೃತ್ವದ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಕಾನೂನು ಸಚಿವ ಜೆ.ಸಿ.ಮಾಧುಸ್ವಾಮಿ, ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ ಮತ್ತು ಹಿರಿಯ ಕಾಂಗ್ರೆಸ್ ಶಾಸಕ ಆರ್.ವಿ.ದೇಶಪಾಂಡೆ ಸದಸ್ಯರಾಗಿರುವ ಸಮಿತಿಯು, 4 ಬಾರಿ ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿರುವ, 8 ಬಾರಿ ಶಾಸಕರಾಗಿರುವ ಯಡಿಯೂರಪ್ಪ ಅವರನ್ನು ಪ್ರಶಸ್ತಿಗೆ ಆಯ್ಕೆ ಮಾಡಿತು. ಪ್ರಶಸ್ತಿಗೆ ನಾವು ಹಲವು ಹೆಸರನ್ನು ಪರಿಶೀಲಿಸಿದೆವು. ಆದರೆ, ಆಯ್ಕೆ ಕ್ಲಿಷ್ಟಕರವಾಗಿತ್ತು. ಯಡಿಯೂರಪ್ಪ ಅವರ ಆಯ್ಕೆ ಸರ್ವಾನುಮತದಿಂದ ಕೂಡಿದೆ ಎಂದ ಅವರು ಅತ್ಯುತ್ತಮ ಶಾಸಕ ಪ್ರಶಸ್ತಿಯನ್ನು ಪ್ರತಿ ವರ್ಷ ನೀಡಲಾಗುವುದು ಎಂದು ಕಾಗೇರಿ ಹೇಳಿದರು. ಲೋಕಸಭೆ ಸ್ಪೀಕರ್ ಆಗಿ ಬಿರ್ಲಾ ಅವರು ಅತ್ಯುತ್ತಮ ರೀತಿಯ ಮಾರ್ಗದರ್ಶನ ಕೊಡುತ್ತಿದ್ದಾರೆ. ಲೋಕಸಭಾ ಮಾದರಿಯಲ್ಲಿ ಅತ್ಯುತ್ತಮ ಶಾಸಕ ಪ್ರಶಸ್ತಿ ಕೊಡಲು ಆರಂಭಿಸಲು ಸಲಹೆ ಕೊಟ್ಟಿದ್ದರು.

## ವಿನೀತ ಭಾವದಿಂದ ಸ್ವೀಕಾರ

ಅತ್ಯುತ್ತಮ ಶಾಸಕ ಪ್ರಶಸ್ತಿ ಬಗ್ಗೆ ಬಿಎಸ್‌ವೈ ಸಂತಸ ವ್ಯಕ್ತಪಡಿಸಿ ಟ್ವೀಟ್ ಮಾಡಿದ್ದಾರೆ. ಜನಪ್ರತಿನಿಧಿಯಾಗಿ, ಪ್ರಜಾಪ್ರಭುತ್ವದ ದೇಗುಲದಲ್ಲಿ ಜನರ ಆಶೋತ್ತರಗಳ ಈಡೇರಿಕೆಯ ದೊಡ್ಡ ಜವಾಬ್ದಾರಿಯ ಅರಿವಿನೊಂದಿಗೆ, ಶಾಸಕಾಂಗದ ಕರ್ತವ್ಯಗಳನ್ನು ನಿರ್ವಹಿಸಲು ಪ್ರಾಮಾಣಿಕವಾಗಿ ಪ್ರಯತ್ನಿಸಿದ್ದೇನೆ ಎಂದಿದ್ದಾರೆ. ರಾಜ್ಯದ ವಿಧಾನಮಂಡಲದ ಇತಿಹಾಸದಲ್ಲಿ ಪ್ರಥಮ ಬಾರಿಗೆ ನೀಡಲಾದ ಅತ್ಯುತ್ತಮ ಶಾಸಕ ಪ್ರಶಸ್ತಿಯನ್ನು ಅತ್ಯಂತ ವಿನೀತ ಭಾವದಿಂದ ಸ್ವೀಕರಿಸಿದ್ದೇನೆ. ರಾಜ್ಯದ ವಿಧಾನಮಂಡಲದ ಇತಿಹಾಸದಲ್ಲಿ ಪ್ರಥಮ ಬಾರಿಗೆ ನೀಡಲಾದ ಅತ್ಯುತ್ತಮ ಶಾಸಕ ಪ್ರಶಸ್ತಿಯನ್ನು ಅತ್ಯಂತ ವಿನೀತ ಭಾವದಿಂದ ಸ್ವೀಕರಿಸಿದ್ದೇನೆ ಎಂದು ಟ್ವೀಟ್ ಮಾಡಿದ್ದಾರೆ.

# ಬಿ.ಎಸ್.ಯಡಿಯೂರಪ್ಪಗೆ ಅತ್ಯುತ್ತಮ ಶಾಸಕ ಪ್ರಶಸ್ತಿ



ಕಂಪಿಲವಾಣಿ ವರದಿ

......................

**ಬೆಂಗಳೂರು:** ಕರ್ನಾಟಕ ರಾಜ್ಯದ ವಿಧಾನಮಂಡಲ ಅಧಿವೇಶನದಲ್ಲಿ ಇದೇ ಮೊದಲ ಬಾರಿಗೆ ಲೋಕಸಭಾ ಮಾದರಿಯಲ್ಲಿ ಅತ್ಯುತ್ತಮ ಶಾಸಕ ಪ್ರಶಸ್ತಿ ನೀಡಲಾಗಿದ್ದು, ಬಿ.ಎಸ್.ಯಡಿಯೂರಪ್ಪ ನವರು ಅತ್ಯುತ್ತಮ ಶಾಸಕ ಪ್ರಶಸ್ತಿ ನೀಡಲಾಯಿತು. ಜಂಟಿ ಅಧಿವೇಶನದಲ್ಲಿ ಲೋಕಸಭೆ ಸ್ಪೀಕರ ಓಮ್ ಬಿರ್ಲಾ ಅವರು ಯಡಿಯೂರಪ್ಪರಿಗೆ ಅತ್ಯುತ್ತಮ ಶಾಸಕ ಪ್ರಶಸ್ತಿ ನೀಡಿ ಗೌರವಿಸಿದರು.

ಈ ಸಂದರ್ಭದಲ್ಲಿ ಸ್ಪೀಕರ ವಿಶ್ವೇಶ್ವರಯ್ಯ ಹೆಗಡೇಕಾಗೇರಿ ಮಾತನಾಡಿ, ಐತಿಹಾಸಿಕ ಜಂಟಿ ಅಧಿವೇಶನದಲ್ಲಿ ಇಂತಹ ಪ್ರಶಸ್ತಿಯನ್ನು ಇದೇ ಮೊದಲ ಬಾರಿಗೆ ನೀಡುತ್ತಿದ್ದು, ಮುಂದಿನ ವರ್ಷದಿಂದ ಈ ಪ್ರಕ್ರಿಯೆ ಮುಂದುವರೆಯಲಿದೆ ಎಂದರು. ಸಂಸದೀಯ ಪಟುವಾಗಿ ಸದನಕ್ಕೆ ಮಾರ್ಗದರ್ಶನ ಮಾಡಿದವರಿಗೆ ಸಹಜವಾಗಿ ಯಾರಿಗೆ ಪ್ರಶಸ್ತಿ ಕೊಡಬೇಕು ಎನ್ನುವುದು ಗೊಂದಲ ಮೂಡಿಸಿತ್ತು. ನನ್ನ ಜೀವನದಲ್ಲಿ ಯಡಿಯೂರಪ್ಪನವರಿಗೆ ಅತ್ಯುತ್ತಮ ಶಾಸಕ ಪ್ರಶಸ್ತಿ ನೀಡುತ್ತಿರುವುದು ಹೆಮ್ಮೆಯ ಸಂಗತಿ ಎಂದರು.

# ಶಾಸಕರು ಪ್ರಜಾಪ್ರಭುತ್ವಕ್ಕಾಗಿ

# ನವಭಾರತ ನಿರ್ಮಾಣಕ್ಕೆ ಎಲ್ಲರ ಸಹಕಾರ ಅಗತ್ಯ : ಓಂ ಬಿರ್ಲಾ

ಕಂಪಿಲವಾಣಿ ವರದಿ

......................

**ಬೆಂಗಳೂರು:** ಪ್ರಸ್ತುತ ನಾವು 75ನೇ ಸ್ವಾತಂತ್ರ್ಯದ ಅಮೃತ ಮಹೋತ್ಸವದ ಸಂಭ್ರಮದಲ್ಲಿದ್ದು, ಈ ಸಂದರ್ಭದಲ್ಲಿ ನವಭಾರತ ನಿರ್ಮಾಣಕ್ಕೆ ಎಲ್ಲರ ಸಹಕಾರ ಅಗತ್ಯ ಎಂದು ಲೋಕಸಭಾ ಸ್ಪೀಕರ ಓಂ ಬಿರ್ಲಾ ಹೇಳಿದ್ದಾರೆ.

ವಿಧಾನಸಭೆಯಲ್ಲಿಂದು ವಿಧಾನಮಂಡಲ ಜಂಟಿ ಅಧಿವೇಶನ ಉದ್ದೇಶಿಸಿ ಮಾತನಾಡಿ, ನಮ್ಮದು ವಿಭಿನ್ನ ಸಿದ್ಧಾಂತ. ಪ್ರಜಾಪ್ರಭುತ್ವ ಸಂಸ್ಥೆಗಳ ಮೂಲಕ ಜನಪ್ರತಿನಿಧಿಗಳು ಅರ್ಥಪೂರ್ಣ ಚರ್ಚೆ, ಸಂವಾದಗಳೊಂದಿಗೆ ಜನರ ಆಶೋತ್ತರಗಳ ಈಡೇರಿಕೆಗೆ ಕ್ರಮ ಕೈಗೊಳ್ಳಬೇಕಾಗುತ್ತದೆ ಎಂದರು.

ವಿಧಾನಮಂಡಲವನ್ನು ಜನಹಿತಕ್ಕಾಗಿ ಸಕಾರಾತ್ಮಕವಾಗಿ ಚರ್ಚೆಗಾಗಿ ಮೀಸಲಿಟ್ಟಾಗ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಹೆಚ್ಚು ಬಲಶಾಲಿಯನ್ನಾಗಿಸಬಹುದಾಗಿದೆ ಎಂದು ಲೋಕಸಭಾ ಧ್ಯಕ್ಷರಾದ ಓಂ ಬಿರ್ಲಾ ಅಭಿಪ್ರಾಯಪಟ್ಟರು.

ಭಾರತ ಸ್ವಾತಂತ್ರ್ಯೋತ್ಸವ ಅಮೃತ ಮಹೋತ್ಸವದ ಅಂಗವಾಗಿ 'ಪ್ರಜಾಪ್ರಭುತ್ವ: ಸಂಸದೀಯ ಮೌಲ್ಯಗಳ ರಕ್ಷಣೆ' ಕುರಿತು ಇದೇ ಮೊದಲ ಬಾರಿಗೆ ಕರ್ನಾಟಕ ವಿಧಾನಮಂಡಲ ಜಂಟಿ ಅಧಿವೇಶನವನ್ನುದ್ದೇಶಿಸಿ ಅವರು ಮಾತನಾಡಿದರು.



ನಾವು ವಿಧಾನಮಂಡಲವನ್ನು ಜನಹಿತಕ್ಕಾಗಿ ಸಕಾರಾತ್ಮಕವಾಗಿ ಚರ್ಚೆಗಾಗಿ ಮೀಸಲಿಟ್ಟಾಗ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಹೆಚ್ಚು ಬಲಶಾಲಿಯನ್ನಾಗಿಸಬಹುದಾಗಿದೆ. ಇದಕ್ಕಾಗಿ ಸದನದ ಸದಸ್ಯರು ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಪಾರದರ್ಶಕಗೊಳಿಸಬೇಕು. ಶಾಸಕಾಂಗ ಕಾರ್ಯಾಂಗ ನ್ಯಾಯಾಂಗಗಳಲ್ಲಿ ಶಾಸಕರ ಅಧಿಕಾರ ಜವಾಬ್ದಾರಿ ಹೆಚ್ಚಾಗಿರುತ್ತದೆ. ಶಾಸಕರು ನೀತಿವಂತರು ಸತ್ಯವಂತರು ಆಗಬೇಕೆಂಬ ಆಸೆಯಿಂದ ಶಾಸಕಾಂಗವನ್ನು ರೂಪಿಸಲಾಯಿತು. ಶಾಸಕರ ದಕ್ಷತೆ ಕ್ಷಮತೆಯನ್ನು ಹೆಚ್ಚಿಸಲು ವಿಧಾನಮಂಡಲ ಅಧಿವೇಶನ ಪ್ರಮುಖ ಪಾತ್ರವಹಿಸುತ್ತದೆ. ವ್ಯಾಪಕ ಚರ್ಚೆ ಸಂವಾದಗಳು ಕಾನೂನುಗಳು ರೂಪಿಸುವಾಗ ಸದನದಲ್ಲಿ ಆಗದೇ ಇರುವುದು ಬೇಸರದ ಸಂಗತಿ. ಹೀಗಾಗಿ ಶಾಸಕರ ಪಾತ್ರ ಸದನದಲ್ಲಿ ಅವರ ಸಹಭಾಗಿತ್ವ ಚರ್ಚೆ ಬಹಳ ಅಗತ್ಯವಾಗಿದೆ ಎಂದರು.

ವಿಧಾನಸೌಧ ನಿರ್ಮಾತೃ ಮಾಜಿ ಮುಖ್ಯಮಂತ್ರಿ ಕೆಂಗಲ್ ಹನುಮಂತಯ್ಯನವರನ್ನು ಹಾಗೂ ಬೆಂಗಳೂರು ನಿರ್ಮಾತೃ ಕೆಂಪೇಗೌಡರನ್ನು ಸ್ಮರಿಸಿ ಮಾತನಾಡಿದ ಓಂ ಬಿರ್ಲಾ ದೇಶದ ವಿವಿಧ ಭಾಗಗಳಿಂದ ಬೆಂಗಳೂರಿಗೆ ಬರುವ ಜನ ಸಾಮಾನ್ಯವಾಗಿ ವಿಧಾನಸೌಧಕ್ಕೆ ಭೇಟಿ ನೀಡಿ ಇದರಿಂದ ಪ್ರೇರಿತಗೊಳ್ಳುತ್ತಾರೆ. ಕರ್ನಾಟಕ ವಿಧಾನಸಭೆ ಮತ್ತು ವಿಧಾನ ಪರಿಷತ್ತಿನ ಸದಸ್ಯರನ್ನು ಭೇಟಿಯಾಗಿ ಬಹಳ ಸಂತಸವಾಗುತ್ತದೆ. ಕರ್ನಾಟಕದ ವಿಧಾನಸಭೆ ಪ್ರಜಾಪ್ರಭುತ್ವದ ಪ್ರತೀಕವಾಗಿದೆ. ಜನರ ಆಸೆಗಳನ್ನು ಪ್ರತಿನಿಧಿಸುವ ಐತಿಹಾಸಿಕ ಭವನ ಇದಾಗಿದೆ. ಕರ್ನಾಟಕ ಸಮೃದ್ಧ ಗೌರವಯುತ ವಿಧಾನಸಭೆ ಹೊಂದಿದೆ. ಬಸವೇಶ್ವರರ ಅನುಭವ ಮಂಟಪವೇ ಸಂಸತ್ತಾಗಿತ್ತು. ರಾಣಿ ಚೆನ್ನಮ್ಮ ಅವರ ತ್ಯಾಗ ಪ್ರೇರಣೀಯ. ಕರ್ನಾಟಕದ ಪ್ರಜಾಪ್ರಭುತ್ವದ ಯಾತ್ರೆಯನ್ನು ಸಮೃದ್ಧಗೊಳಿಸುವಲ್ಲಿ ಕಾರಣೀಭೂತರಾದವರಿಗೆ ಧನ್ಯವಾದಗಳನ್ನು ಸಲ್ಲಿಸುವುದಾಗಿ ಹೇಳಿದರು.

ಪ್ರಜಾಪ್ರಭುತ್ವದಲ್ಲಿ ಸ್ವತಂತ್ರದ ಹಿಂದಿನ ಹೋರಾಟ ಸಂಸದೀಯ ಆಡಳಿತ ನಡೆಸುತ್ತಿದ್ದೇವೆ. ಸಂಸದೀಯ ವ್ಯವಸ್ಥೆ ಪ್ರಜಾಪ್ರಭುತ್ವ ವ್ಯವಸ್ಥೆ ಎಲ್ಲಿಗೆ ಬಂದಿದೆ. ನಡೆದು ಬಂದ ದಾರಿ ಏನು ಎಂಬುದರ ಅವಲೋಕನ ಇದಾಗಿದೆ. ನಮ್ಮ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಜನರೇ ಕೇಂದ್ರಬಿಂದುವಾಗಿದ್ದಾರೆ. ಮತದಾರರು ಪ್ರತಿಚುನಾವಣೆಯಲ್ಲಿ ಮತ ಹಾಕಿ ಜನಪ್ರತಿನಿಧಿಗಳನ್ನು ಆಯ್ಕೆ ಮಾಡುವುದು ನಮ್ಮ ಪ್ರಜಾಪ್ರಭುತ್ವ ವ್ಯವಸ್ಥೆಗೆ ಸಾಕ್ಷಿಯಾಗಿದೆ. ದೇಶದ ಪ್ರಜಾಪ್ರಭುತ್ವ ವ್ಯವಸ್ಥೆಯಿಂದ ಜನರ ಕಲ್ಯಾಣವನ್ನು ಕಾನೂನನ್ನು ಜಾರಿಗೊಳಿಸುತವೆ. 75 ವರ್ಷದ ಈ ಯಾತ್ರೆಯಲ್ಲಿ ಪ್ರಜಾಪ್ರಭುತ್ವ

2 ನೇ ಪುಟಕ್ಕೆ..

# ಬಿಎಸ್‌ವೈಗೆ ಅತ್ಯುತ್ತಮ ಶಾಸಕ ಪ್ರಶಸ್ತಿ



ಬೆಂಗಳೂರು, ಸೆ.24: ಬಿಜೆಪಿ ನಾಯಕ ಮತ್ತು ಶಿಕಾರಿಪುರ ಶಾಸಕ ಬಿ.ಎಸ್. ಯಡಿಯೂರಪ್ಪ ಅವರು ಅತ್ಯುತ್ತಮ ಶಾಸಕ ಪ್ರಶಸ್ತಿಗೆ ಪಾತ್ರರಾಗಿದ್ದಾರೆ. ಇದೇ ಮೊದಲ ಬಾರಿಗೆ ಈ ಪ್ರಶಸ್ತಿಯನ್ನು ನೀಡಲಾಗುತ್ತಿದ್ದು, ಚೊಚ್ಚಲ ಪ್ರಶಸ್ತಿ ಯಡಿಯೂರಪ್ಪ ಅವರಿಗೆ ಲಭಿಸಿದೆ.

ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಮತ್ತು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರ ಸಮ್ಮುಖದಲ್ಲಿ ವಿಧಾನಸಭೆಯ ಜಂಟಿ ಅಧಿವೇಶನದಲ್ಲಿ ವಿಧಾನಸಭಾ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಈ ಘೋಷಣೆ ಮಾಡಿದರು.

ಸ್ಪೀಕರ್ ಕಾಗೇರಿ ನೇತೃತ್ವದ, ಮುಖ್ಯಮಂತ್ರಿ, ಬಸವರಾಜ ಬೊಮ್ಮಾಯಿ, ಕಾನೂನು ಸಚಿವ ಜೆಸಿ ಮಾಧುಸ್ವಾಮಿ, ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ ಮತ್ತು ಹಿರಿಯ ಕಾಂಗ್ರೆಸ್ ಶಾಸಕ ಆರ್.ವಿ.ದೇಶಪಾಂಡೆ ಸದಸ್ಯರಾಗಿರುವ ಸಮಿತಿಯು, 4 ಬಾರಿ ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿರುವ, 8 ಬಾರಿ ಶಾಸಕರಾಗಿರುವ ಯಡಿಯೂರಪ್ಪ ಅವರನ್ನು ಪ್ರಶಸ್ತಿಗೆ ಆಯ್ಕೆ ಮಾಡಿತು.

ಪ್ರಶಸ್ತಿಗೆ ನಾವು ಹಲವು ಹೆಸರನ್ನು ಪರಿಶೀಲಿಸಿದೆವು. ಆದರೆ, ಆಯ್ಕೆ ಕ್ಲಿಷ್ಟಕರವಾಗಿತ್ತು ಎಂದು ಕಾಗೇರಿ ತಿಳಿಸಿದರು.

# ನೂತನ ಲೋಕಸಭಾ ಕಟ್ಟಡಕ್ಕೆ "ಅನುಭವ ಮಂಟಪ" ಹಸರಿಡಿ; ಹೊರಟ್ಟಿ

ಬೆಂಗಳೂರು, ಸೆ 24:ದೆಹಲಿಯಲ್ಲಿ ನೂತನವಾಗಿ ನಿರ್ಮಿಸುತ್ತಿರುವ ಕೇಂದ್ರ ಸರಕಾರದ ಮಹತ್ವಾಕಾಂಕ್ಷೆಯ ಲೋಕಸಭಾ ನೂತನ ಸಂಕೀರ್ಣದ ಕಟ್ಟಡ ವೊಂದಕ್ಕೆ "ಅನುಭವ ಮಂಟಪ" ಎಂದು ನಾಮಕರಣ ಮಾಡುವಂತೆ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಲೋಕಸಭಾಧ್ಯಕ್ಷ ಓಂ ಬಿರ್ಲಾ ಅವರಿಗೆ ಆದ್ಯತಾಪೂರ್ವಕ ಮನವಿ ಮಾಡಿದ್ದಾರೆ.



ಈ ಕುರಿತು ವಿಧಾನ ಸೌಧದಲ್ಲಿಂದು ಲೋಕಸಭಾಧ್ಯಕ್ಷ ಓಂ ಬಿರ್ಲಾ ಅವರಿಗೆ ಮನವಿಯೊಂದನ್ನು ಸಲ್ಲಿಸಿರುವ ಸಭಾಪತಿ ಬಸವರಾಜ ಹೊರಟ್ಟಿ 12ನೇ ಶತಮಾನದಲ್ಲಿ ಅಲ್ಲಮಪ್ರಭು ಮತ್ತು ಬಸವಾದಿ ಶರಣರು ನಿರ್ಮಿಸಿದ ಅನುಭವ ಮಂಟಪ ಇಡೀ ವಿಶ್ವದ ಪ್ರಪ್ರಥಮ ಶಾಸನ ಸಭೆ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ಅಸಮಾನತೆಯನ್ನು ತೊಡೆದು ಹಾಕಿ "ಸರ್ವರಿಗೂ ಸಮಪಾಲು ಸರ್ವರಿಗೂ ಸಮಬಾಳು" ಎಂಬ ಸಂದೇಶ ಸಾರುವ ಸಾರ್ವಕಾಲಿಕ ವಿಚಾರಧಾರೆಯ ಅಡಿಯಲ್ಲಿ ನಿರ್ಮಾಣಗೊಂಡಿದ್ದ ಅನುಭವ ಮಂಟಪ ಪ್ರಜಾಪ್ರಭುತ್ವ ಪರಿಕಲ್ಪನೆಗೆ ಮೂಲ ಅಡಿಪಾಯ ಹಾಗೂ ಆಶಯವಾಗಿದೆ.

ಶ್ರೇಷ್ಠ ಸಮಾಜ ಸುಧಾರಕ, ದಾರ್ಶನಿಕ ಹಾಗೂ ಅತ್ಯುತ್ತಮ ಆಡಳಿತಗಾರರಾಗಿದ್ದ ಬಸವಣ್ಣನವರು ತಮ್ಮ ವಚನಗಳ ಮೂಲಕ ಸಾಮಾಜಿಕ ಸಬಲೀಕರಣ, ಸೌಹಾರ್ದತೆ, ಸಹೋದರತ್ವ ಹಾಗೂ ಸಮಾನತೆ ಕುರಿತು ಇಡೀ ಸಮಾಜಕ್ಕೆ ಸಂದೇಶ ನೀಡಿದ್ದಾರೆ. ತಮ್ಮ ಜೀವನದುದ್ದಕ್ಕೂ ಸಾಮಾಜಿಕ ಒಳಗೊಳ್ಳುವಿಕೆ ಕುರಿತು ಬೋಧಿಸಿರುವ ಬಸವಣ್ಣನವರು ಲಿಂಗ ಸಮಾನತೆ ಬಗ್ಗೆ 12ನೇ ಶತಮಾನದಲ್ಲಿಯೇ ಕ್ರಾಂತಿಕಾರಿ ಚಳವಳಿ ಮೂಲಕ ಇಡೀ ಮನುಕುಲಕ್ಕೆ ಮಾನವೀಯತೆಯ ಸಂದೇಶ ಸಾರಿದ್ದಾರೆ. ಅಂತಹ ಮಹಾನ್ ಪುರುಷರು ಪ್ರಜಾಪ್ರಭುತ್ವದ ನೆಲೆಗಟ್ಟಿನಲ್ಲಿ ನಿರ್ಮಿಸಿದ್ದ ಅನುಭವ ಮಂಟಪ ಸರ್ವ ಜಾತಿ, ಜನಾಂಗ ಸಮುದಾಯ ಹಾಗೂ ಲಿಂಗಗಳಿಗೆ ಪ್ರಾತಿನಿಧ್ಯ ನೀಡಿ ಪ್ರಜಾಸತ್ತಾತ್ಮಕ ಮೌಲ್ಯಗಳ ವರ್ಧನೆಯ ಬೀಜಾಂಕುರ ಮಾಡಿದ್ದಾರೆ. ಬಸವಾದಿ ಶರಣರು ರಚಿಸಿರುವ ಅಸಂಖ್ಯಾತ ವಚನಗಳೇ ಇಂದಿನ ಸಂವಿಧಾನದ ಅನುಚ್ಛೇದಗಳಾಗಿ ರೂಪುಗೊಂಡಿರುವುದು ಹೆಮ್ಮೆಯ ವಿಷಯವಾಗಿದೆ ಎಂದು ಬಸವರಾಜ ಹೊರಟ್ಟಿ ತಿಳಿಸಿದ್ದಾರೆ.

# ಬಿಎಸ್‌ವೈಗೆ ಅತ್ಯುತ್ತಮ ಶಾಸಕ ಪ್ರಶಸ್ತಿ ಪ್ರದಾನ



**ಪ್ರಜಾಪಥ ವಾರ್ತೆ**

**ಬೆಂಗಳೂರು:** ಲೋಕಸಭಾ ಮಾದರಿಯಲ್ಲಿ ಇದೇ ಮೊದಲ ಬಾರಿಗೆ ಕರ್ನಾಟಕ ರಾಜ್ಯದ ವಿಧಾನಮಂಡಲ ಅಧಿವೇಶನದಲ್ಲಿ ಬಿ.ಎಸ್.ಯಡಿಯೂರಪ್ಪ ನವರಿಗೆ ಅತ್ಯುತ್ತಮ ಶಾಸಕ ಪ್ರಶಸ್ತಿ ನೀಡಲಾಯಿತು. ಲೋಕಸಭೆ ಸ್ಪೀಕರ್ ಓಂ ಬಿರ್ಲಾ ಅವರು ಅತ್ಯುತ್ತಮ ಶಾಸಕ ಪ್ರಶಸ್ತಿ ನೀಡಿ ಗೌರವಿಸಿದರು. ಬಳಿಕ ಭಾರತ ಸ್ವಾತಂತ್ರ್ಯೋತ್ಸವ ಅಮೃತ ಮಹೋತ್ಸವದ ಅಂಗವಾಗಿ 'ಪ್ರಜಾಪ್ರಭುತ್ವ: ಸಂಸದೀಯ ಮೌಲ್ಯಗಳ ರಕ್ಷಣೆ' ಕುರಿತು ಕರ್ನಾಟಕ ವಿಧಾನಮಂಡಲ ಜಂಟಿ ಅಧಿವೇಶನವನ್ನುದ್ದೇಶಿಸಿ ಅವರು ಮಾತನಾಡಿದರು.

# ಬಿಎಸ್‌ವೈಗೆ ಅತ್ಯುತ್ತಮ ಶಾಸಕ ಪ್ರಶಸ್ತಿ

**ಪ್ರಜಾಸಾಕ್ಷಿ ವರದಿ**



ಬೆಂಗಳೂರು: ಲೋಕಸಭೆ ಮಾದರಿಯಲ್ಲಿ ಇದೇ ಮೊದಲ ಬಾರಿಗೆ ಅತ್ಯುತ್ತಮ ಶಾಸಕ ಪ್ರಶಸ್ತಿಯನ್ನು ಇಂದು ಘೋಷಿಸಲಾಗಿದ್ದು, ಲೋಕಸಭೆ ಸ್ಪೀಕರ್ ಓಂ ಬಿರ್ಲಾ ಅವರು ವಿಧಾನಸಭೆ ಅಧಿವೇಶನದಲ್ಲಿ ಭಾಗವಹಿಸಿ ಮಾಜಿ ಮುಖ್ಯಮಂತ್ರಿ, ಶಾಸಕ ಬಿ.ಎಸ್.ಯಡಿಯೂರಪ್ಪನವರಿಗೆ ಪ್ರಶಸ್ತಿ ಪ್ರದಾನ ಮಾಡಿದ್ದಾರೆ.

2ನೇ ಪುಟಕ್ಕೆ...

# ಬಿಎಸ್‌ವೈಗೆ ಅತ್ಯುತ್ತಮ ಶಾಸಕ ಪ್ರಶಸ್ತಿ

ಲೋಕಸಭೆ ಮಾದರಿಯಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗಿದ್ದು, ಮೊದಲ ಬಾರಿಗೆ ವಿಧಾನಸಭೆಯಲ್ಲಿ ನೀಡುತ್ತಿರುವ ಪ್ರಶಸ್ತಿ ಇದಾಗಿದೆ. ಲೋಕಸಭೆ ಸ್ಪೀಕರ್ ಓಂ ಬಿರ್ಲಾ ಅವರು ಬಿ.ಎಸ್.ಯಡಿಯೂರಪ್ಪ ಅವರಿಗೆ ಅತ್ಯುತ್ತಮ ಶಾಸಕ ಪ್ರಶಸ್ತಿ ಪ್ರದಾನ ಮಾಡಿದ್ದಾರೆ. ಯಡಿಯೂರಪ್ಪನವರಿಗೆ ಬೆಳ್ಳಿಯ ಪ್ರಶಸ್ತಿ ಫಲಕ ಪ್ರದಾನ ಮಾಡಿ ಗೌರವ ಸಲ್ಲಿಸಲಾಗಿದೆ. ಇದೇ ವೇಳೆ ಕಾರ್ಯಕ್ರಮ ಆರಂಭವಾಗುತ್ತಿದ್ದಂತೆ ಉಭಯ ಸದನದಲ್ಲಿ ಲೋಕಸಭೆ ಸ್ಪೀಕರ್ ಓಂ ಬಿರ್ಲಾ ಅವರನ್ನು ಸನ್ಮಾನಿಸಲಾಯಿತು. ಸ್ಪೀಕರ್ ಮತ್ತು ಪರಿಷತ್ ಸಭಾಪತಿಯವರಿಂದ ಮೈಸೂರು ಪೇಟಾ ಹಾಕಿ, ಶಾಲು ಹೊದಿಸಿ ಸನ್ಮಾನ ಮಾಡಲಾಯಿತು. ಈ ವೇಳೆ ಮಾತನಾಡಿದ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ, ಈ ವರ್ಷದಿಂದ ಅತ್ಯುತ್ತಮ ಶಾಸಕ ಪ್ರಶಸ್ತಿ ಕೊಡುತ್ತಿದ್ದೇವೆ. ಲೋಕಸಭೆ ಸ್ಪೀಕರ್ ಜೊತೆ ನಾನು ಅನೇಕ ಕಾರ್ಯಕ್ರಮಗಳಲ್ಲಿ ಭಾಗವಹಿಸಿದ್ದೇನೆ. ಅತ್ಯುತ್ತಮ ಶಾಸಕ ಪ್ರಶಸ್ತಿ ಲೋಕಸಭೆ ಸೇರಿ ಅನೇಕ ರಾಜ್ಯಗಳಲ್ಲಿದೆ. ಇದಕ್ಕೊಂದು ಸಮಿತಿ ರಚಿಸಲಾಗಿದೆ. ಸಮಿತಿಗೆ ನಾನು ಅಧ್ಯಕ್ಷ, ಸಿದ್ದರಾಮಯ್ಯ, ಮಾಧುಸ್ವಾಮಿ, ಆರ್.ವಿ.ದೇಶಪಾಂಡೆ ಸದಸ್ಯರು. ಮೊದಲ ಅತ್ಯುತ್ತಮ ಶಾಸಕ ಪ್ರಶಸ್ತಿಯನ್ನು ಯಡಿಯೂರಪ್ಪನವರಿಗೆ ನೀಡಲಾಗುತ್ತಿದೆ ಎಂದರು.

ಯಡಿಯೂರಪ್ಪ ಅನೇಕ ಜವಾಬ್ದಾರಿ ಹೊತ್ತವರು, ಉತ್ತಮ ಆಡಳಿತ ಕೊಟ್ಟವರು. ರೈತನಾಯಕ, ಅತ್ಯುತ್ತಮ ಸಂಸದೀಯ ಪಟು. ಯಡಿಯೂರಪ್ಪನವರ ಹೆಸರು ಆಯ್ಕೆ ಮಾಡಿದ್ದು ನನಗೆ ಹೆಮ್ಮೆ ತಂದಿದೆ ಎಂದು ಅತ್ಯುತ್ತಮ ಶಾಸಕರ ಹೆಸರು ಘೋಷಣೆ ಮಾಡಲಾಗಿದೆ. ಈ ವರ್ಷದಿಂದ ಹೊಸ ಸಂಪ್ರದಾಯ ಪ್ರಾರಂಭವಾಗಿದೆ. ಪ್ರತಿ ವರ್ಷಕ್ಕೊಮ್ಮೆ ಉತ್ತಮ ಶಾಸಕ ಪ್ರಶಸ್ತಿ ಪ್ರದಾನ ಮಾಡಲಾಗುವುದು. ಲೋಕಸಭೆ ಮಾದರಿಯಲ್ಲಿ ಪ್ರಶಸ್ತಿ ನೀಡಲಾಗುತ್ತಿದೆ ಎಂದು ವಿವರಿಸಿದರು.

ಓಂ ಬಿರ್ಲಾ ಅವರಿಗೆ ಸ್ಪೀಕರ್ ಕಾಗೇರಿ ತಮ್ಮ ಪೀಠ ಬಿಟ್ಟುಕೊಟ್ಟರು. ಬಳಿಕ ಸ್ಪೀಕರ್ ಕಾಗೇರಿ ಹಾಗೂ ವಿಧಾನ ಪರಿಷತ್ ಸಭಾಪತಿ ಬಸವರಾಜ್ ಹೊರಟ್ಟಿಯವರು ಅವರ ಪಕ್ಕಕ್ಕೆ ಕುಳಿತರು. ಸದನಕ್ಕೆ ಕಾಂಗ್ರೆಸ್ ಸದಸ್ಯರು ಬಹಿಷ್ಕಾರ ಹಾಕಿದರು. ಬಿಜೆಪಿ, ಜೆಡಿಎಸ್ ಸದಸ್ಯರು ಉಪಸ್ಥಿತರಿದ್ದರು. ಉಭಯ ಸದನದಲ್ಲಿ ಇದೇ ಮೊದಲ ಸಲ ಕಾರ್ಯಕ್ರಮದ ನಿರೂಪಣೆ ಸಹ ಮಾಡಲಾಗಿದೆ.

# ಬಿ.ಎಸ್.ಯಡಿಯೂರಪ್ಪ ಅವರಿಗೆ ಅತ್ಯುತ್ತಮ ಶಾಸಕ ಪ್ರಶಸ್ತಿ



ಸ್ಟಾರ್ ಆಫ್ ರಾಯಚೂರು

---

**ಬೆಂಗಳೂರು :** ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರು ಪ್ರಜಾಪ್ರಭುತ್ವ - ಸಂಸದೀಯ ಮೌಲ್ಯಗಳ ರಕ್ಷಣೆ ಎಂಬ ವಿಷಯದ ಬಗ್ಗೆ ವಿಧಾನಸಭೆ ಮತ್ತು ವಿಧಾನ ಪರಿಷತ್ತಿನ ಸದಸ್ಯರನ್ನು ಉದ್ದೇಶಿಸಿ ಇಂದು ಮಾತನಾಡಿದರು. ಇದೇ ಸಂದರ್ಭದಲ್ಲಿ, ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರಿಗೆ 'ಅತ್ಯುತ್ತಮ ಶಾಸಕ ಪ್ರಶಸ್ತಿ'ಯನ್ನು ನೀಡಿ ಗೌರವಿಸಿದರು.

ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ , ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಸಣ್ಣ ನೀರಾವರಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಜೆ.ಸಿ. ಮಾಧುಸ್ವಾಮಿ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಅತ್ಯುತ್ತಮ ಸಂಸದೀಯ ಕಾರ್ಯನಿರ್ವಹಣೆ ತೋರುವ ಸದಸ್ಯರನ್ನು ಗುರುತಿಸಿ, ಗೌರವಿಸುವ ಪದ್ಧತಿಯನ್ನು ವಿಧಾನಸಭಾಧ್ಯಕ್ಷರು ಪ್ರಾರಂಭಿಸಿದ್ದು, ರಾಜ್ಯದ ವಿಧಾನಮಂಡಲದ ಇತಿಹಾಸದಲ್ಲಿ ಪ್ರಥಮ ಬಾರಿಗೆ ಅತ್ಯುತ್ತಮ ಶಾಸಕ ಗೌರವಕ್ಕೆ ಪಾತ್ರರಾಗಿರುವ ಹಿರಿಯ ನಾಯಕರು, ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪನವರಿಗೆ ಮುಖ್ಯಮಂತ್ರಿ ಬಸವರಾಜ ಎಸ್.ಬೊಮ್ಮಾಯಿ ಅವರು ಅಭಿನಂದನೆಗಳು ಸಲ್ಲಿಸಿದರು.

# ಯಡಿಯೂರಪ್ಪ ಅವರಿಗೆ ಅತ್ಯುತ್ತಮ ಶಾಸಕ ಪ್ರಶಸ್ತಿ



ಬೆಂಗಳೂರು: ಬಿಜೆಪಿ ನಾಯಕ ಮತ್ತು ಶಿಕಾರಿಪುರ ಶಾಸಕ ಬಿ.ಎಸ್. ಯಡಿಯೂರಪ್ಪ ಅವರು ಅತ್ಯುತ್ತಮ ಶಾಸಕ ಪ್ರಶಸ್ತಿಗೆ ಪಾತ್ರರಾಗಿದ್ದಾರೆ. ಇದೇ ಮೊದಲ ಬಾರಿಗೆ ಈ ಪ್ರಶಸ್ತಿಯನ್ನು ನೀಡಲಾಗುತ್ತಿದ್ದು, ಚೊಚ್ಚಲ ಪ್ರಶಸ್ತಿ ಯಡಿಯೂರಪ್ಪ ಅವರಿಗೆ ಲಭಿಸಿದೆ.

ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಮತ್ತು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರ ಸಮ್ಮುಖದಲ್ಲಿ ವಿಧಾನಸಭೆಯ ಜಂಟಿ ಅಧಿವೇಶನದಲ್ಲಿ ವಿಧಾನಸಭಾ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಈ ಘೋಷಣೆ ಮಾಡಿದರು.

ಸ್ಪೀಕರ್ ಕಾಗೇರಿ ನೇತೃತ್ವದ, ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಕಾನೂನು ಸಚಿವ ಜೆಸಿ ಮಾಧುಸ್ವಾಮಿ, ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ ಮತ್ತು ಹಿರಿಯ ಕಾಂಗ್ರೆಸ್ ಶಾಸಕ ಆರ್.ವಿ.ದೇಶಪಾಂಡೆ ಸದಸ್ಯರಾಗಿರುವ ಸಮಿತಿಯು, 4 ಬಾರಿ ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿರುವ, 8 ಬಾರಿ ಶಾಸಕರಾಗಿರುವ ಯಡಿಯೂರಪ್ಪ ಅವರನ್ನು ಪ್ರಶಸ್ತಿಗೆ ಆಯ್ಕೆ ಮಾಡಿತು.

'ಪ್ರಶಸ್ತಿಗೆ [illegible] ಹೆಸರನ್ನು ಪರಿಶೀಲಿಸಿದ್ದೆ . ಆದರೆ, ಆಯ್ಕೆ ಕ್ಲಿಷ್ಟಕರವಾಗಿತ್ತು. ಯಡಿಯೂರಪ್ಪನವರ ಆಯ್ಕೆಯು ಸರ್ವಾನುಮತದಿಂದ ಕೂಡಿದೆ,' ಎಂದು ಕಾಗೇರಿ ಹೇಳಿದರು.

'ಅತ್ಯುತ್ತಮ ಶಾಸಕ ಪ್ರಶಸ್ತಿ'ಯನ್ನು ಪ್ರತಿ ವರ್ಷ ನೀಡಲಾಗುವುದು ಎಂದು ಕಾಗೇರಿ ಹೇಳಿದರು.

### ವಿಧಾನ ಮಂಡಲ ಜಂಟಿ ಅಧಿವೇಶನ ಉದ್ದೇಶಿಸಿ ಲೋಕಸಭಾಧ್ಯಕ್ಷ ಭಾಷಣ

# ಪ್ರಜಾಪ್ರಭುತ್ವ ಗಟ್ಟಿಗೊಳಿಸಲು ಸದಸ್ಯರು ಶ್ರಮಿಸಿ - ಓಂ ಬಿರ್ಲಾ

ಬಿ.ವೆಂಕಟಸಿಂಗ್

ಬೆಂಗಳೂರು, ಸೆ.24

**ಪ್ರಜಾಪ್ರಭುತ್ವ ಗಟ್ಟಿಗೊಳಿಸಲು ಶಾಸಕಾಂಗ ಸಂಸ್ಥೆಯ ಸದಸ್ಯರು ಸಂಕಲ್ಪ ಮಾಡಬೇಕೆಂದು ಲೋಕಸಭೆಯ ಸಭಾಧ್ಯಕ್ಷ ಓಂ ಬಿರ್ಲಾ ಸಲಹೆ ಮಾಡಿದರು.**

ಅವರು ಇಂದು ಕರ್ನಾಟಕ ವಿಧಾನ ಮಂಡಳದ ಉಭಯ ಸದನಗಳ ಸದಸ್ಯರ ಜಂಟಿ ಅಧಿವೇಶನ ಉದ್ದೇಶಿಸಿ ಪ್ರಜಾಪ್ರಭುತ್ವ ಮತ್ತು ಸಂಸದೀಯ ಮೌಲ್ಯಗಳ ರಕ್ಷಣೆ ಕುರಿತು ಮಾತನಾಡಿದ ಅವರು, ಕಳೆದ ಏಳು ದಶಕದಲ್ಲಿ ಪ್ರಜಾ ಪ್ರಭುತ್ವದ ಮೌಲ್ಯಗಳು ಕಾಪಾಡುವಲ್ಲಿ ನಾವು ಎಷ್ಟರ ಮಟ್ಟಿಗೆ ಯಶಸ್ವಿಯಾಗಿದ್ದೇವೆ ಎಂಬುದನ್ನು ಚಿಂತನೆ ಮಾಡಬೇಕಾಗಿದೆ ಎಂದರು.

ಸಂಸದೀಯ ಪ್ರಜಾಪ್ರಭುತ್ವವನ್ನು ಉತ್ತಮ ಆಡಳಿತ ರೂಪ ಎಂದು ಸಾರ್ವತ್ರಿಕವಾಗಿ ಒಪ್ಪಿಕೊಂಡಿದ್ದು ನಮ್ಮ ಪ್ರಜಾಪ್ರಭುತ್ವ ಜನ ಕೇಂದ್ರಿತವಾಗಿದೆ ಎಂದು ಹೇಳಿದರು.

ದೇಶದಲ್ಲಿ 17 ಸಾರ್ವತ್ರಿಕ ಚುನಾವಣೆಗಳು 300 ವಿಧಾನಸಭೆ ಚುನಾವಣೆಗಳು ಯಶಸ್ವಿಯಾಗಿ ನಡೆದು ಮತದಾರರು ಭಾಗವಹಿಸುವಿಕೆಯಿಂದ ಪ್ರಜಾಪ್ರಭುತ್ವ ಗಟ್ಟಿಗೊಂಡಿದೆ ಎಂದರು.

ಪ್ರಜಾಪ್ರಭುತ್ವ ಸಂಸ್ಥೆಗಳು ಜನರ ಆಸೆ, ಆಕಾಂಕ್ಷೆಗಳು ಪೂರೈಸುವ ಮಾಧ್ಯಮವಾಗಿದ್ದು ಜನರ ಕಲ್ಯಾಣ ಅವುಗಳ ಗುರಿಯಾಗಿದೆ. ಆದರೆ, ಆ ಸಂಸ್ಥೆಗಳು ಜನರಿಗೆ ಇನ್ನೂ ಹೆಚ್ಚು ಉತ್ತರದಾಯಿಗಳಾಗಿರಲು ಶ್ರಮಿಸಬೇಕಾಗಿದೆ ಎಂದರು.

ಸಂಸದೀಯ ಪ್ರಜಾಪ್ರಭುತ್ವ ಚುನಾಯಿತ ಪ್ರತಿನಿಧಿಗಳ ಜವಾಬ್ದಾರಿ ಆಧರಿಸಿದೆ. ಜನರ ಆಶಯ ಪ್ರಜಾಪ್ರಭುತ್ವದ ಸಂಸ್ಥೆಗಳ ಮೂಲಕ ಈಡೇರಿಸಬೇಕಾಗಿದೆ ಎಂದು ಹೇಳಿದರು.

ಜನಕಲ್ಯಾಣಕ್ಕೆ ಸಂಬಂಧಿಸಿದ ವಿಷಯಗಳು ರಚನಾತ್ಮಕ ಚರ್ಚೆ ಮೂಲಕ ಶಾಸಕಾಂಗ ಸಂಸ್ಥೆಗಳ ಮೌಲ್ಯ ಹೆಚ್ಚಿಸಬೇಕು. ಈ ಕೆಲಸ ಶಾಸಕಾಂಗ ಸದಸ್ಯರು ಮಾಡಬೇಕು ಎಂದು ಸಲಹೆ ಮಾಡಿದರು.

ಸಂವಿಧಾನ ರಚಿಸುವಾಗ ಜನರ ಸ್ಥಿತಿ-ಗತಿ ಗಮನದಲ್ಲಿಡಬೇಕು, ಶಾಸಕಾಂಗದ ಸದಸ್ಯ

ಈ ಬಗ್ಗೆ ಚರ್ಚಿಸಿ ಕಾನೂನು ರೂಪಿಸಬೇಕು ಎಂದ (4ನೇ ಪುಟಕ್ಕೆ)



## ಬಿಎಸ್‌ವೈಗೆ ಉತ್ತಮ ಶಾಸಕ ಪ್ರಶಸ್ತಿ

ಸುದ್ದಿಮೂಲ ವಾರ್ತೆ, ಬೆಂಗಳೂರು,ಸೆ.24

ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರಿಗೆ 'ಉತ್ತಮ ಶಾಸಕ'' ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಇಂದು ನಡೆದ ವಿಧಾನ ಮಂಡಲದ ಅಧಿವೇಶನದಲ್ಲಿ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಘೋಷಿಸಿದ ಮೇಲೆ ಲೋಕಸಭಾಧ್ಯಕ್ಷ ಓಂ ಬಿರ್ಲಾ ಸನ್ಮಾನಿಸಿ ನೆನಪಿನ ಕಾಣಿಕೆ ಫಲಕ ನೀಡಿದರು.

ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ, ಸಭಾಪತಿ ಬಸವರಾಜ ಹೊರಟ್ಟಿ, ಸಂಸದೀಯ ವ್ಯವಹಾರ ಸಚಿವ ಪಿ.ಸಿ.ಮಾಧುಸ್ವಾಮಿ ಇದ್ದರು.



# ಪ್ರಜಾಪ್ರಭುತ್ವ ಗಟ್ಟಿಗೊಳಿಸಲು ಸದಸ್ಯರು ಶ್ರಮಿಸಿ

ಅವರು ಯಾವುದೇ ಕಾನೂನಿನ ಬಗ್ಗೆ ಜನರು ಆಕ್ಷೇಪಿಸಬಾರದು ಎಂದರು. ಕಾನೂನು ರಚನೆಯಲ್ಲಿ ಸಮರ್ಪಕ ಭಾಗವಹಿಸುವಿಕೆ ಅತೀ ಮುಖ್ಯವಾಗಿದೆ. ಸಮಸ್ಯೆ ಚೆನ್ನಾಗಿ ಅರ್ಥ ಮಾಡಿಕೊಂಡು ರಚಿಸಬೇಕು. ಅದಕ್ಕಾಗಿ ಸದನದಲ್ಲಿ ಶಿಸ್ತು, ಸೌಜನ್ಯ ಮತ್ತು ಸಂಯಮದಿಂದ ವರ್ತಿಸಬೇಕು ಎಂದು ಸಲಹೆ ಮಾಡಿದರು.

ಸದನದಲ್ಲಿ ಅಡಚಣೆಯಾದರೆ ಸಾರ್ವಜನಿಕ ಹಿತಸಕ್ತಿಯ ವಿಷಯದ ಅವಕಾಶ ಕಸಿದುಕೊಂಡಂತೆ ಆಗುತ್ತದೆ. ಅದಕ್ಕಾಗಿ ವಿರೋಧ, ಟೀಕೆಗಳು, ಸಲಹೆಗಳು ಪ್ರಜಾಪ್ರಭುತ್ವದ ಗಟ್ಟಿಗೆ ಕಾರಣೀಭೂತವಾಗಬೇಕು ಎಂದು ನುಡಿದರು. ಪ್ರಜಾಪ್ರಭುತ್ವದಲ್ಲಿ ಜನರು ನಂಬಿಕೆ ಉಳಿಸಿಕೊಳ್ಳಬೇಕು ಅದಕ್ಕಾಗಿ ಶಾಸಕಾಂಗ ವ್ಯವಸ್ಥೆಯ ಸದಸ್ಯರು ಜನರ ವಿಶ್ವಾಸ ಉಳಿಸಿಕೊಳ್ಳುವತ್ತ ನಿಗಾವಹಿಸಬೇಕು ಎಂದರು.

ಸ್ಥಳೀಯ ಸಂಸ್ಥೆಗಳನ್ನು ಸಹ ಬಲಪಡಿಸುವ ಕೆಲಸ ಶಾಸಕಾಂಗ ಸಂಸ್ಥೆಗಳು ಮಾಡುವ ಮೂಲಕ ಪ್ರಜಾಪ್ರಭುತ್ವದ ಎಲ್ಲಾ ಹಂತದಲ್ಲಿ ಗಟ್ಟಿಗೊಳಿಸುವ ಕೆಲಸ ಮಾಡಬೇಕು ಎಂದು ಸಲಹೆ ಮಾಡಿದರು.

ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಮಾತನಾಡಿ, ಪ್ರಜಾಪ್ರಭುತ್ವ ಸಂಸ್ಥೆಗಳು ಗಟ್ಟಿಗೊಳಿಸಬೇಕಾಗಿದೆ. ಮಸೂದೆ ಚರ್ಚೆ  ಇಲ್ಲದೆ ಮಂಡನೆಯಾಗುವುದು ಬೇಸರದ ಸಂಗತಿಯಾಗಿದೆ ಎಂದು ಕಳವಳ ವ್ಯಕ್ತಪಡಿಸಿದ ಅವರು ಚುನಾವಣೆ ವೆಚ್ಚಕ್ಕೆ ಕಡಿವಾಣ ಹಾಕಲು ಚುನಾವಣಾ ಆಯೋಗ ಕಾರ್ಯಪ್ರವೃತ್ತವಾಗಬೇಕಾಗಿದೆ ಎಂದರು.

12ನೇ ಶತಮಾನದಲ್ಲಿ ಬಸವಣ್ಣನವರು ಅನುಭವ ಮಂಟಪದ ಮೂಲಕ ಮೊದಲ ಸಂಸತ ನಡೆಸಿದ್ದರು. ಈಗ ದೆಹಲಿಯಲ್ಲಿ ನಿರ್ಮಿಸುತ್ತಿರುವ ಸಂಸದ ಭವನಕ್ಕೆ ಅನುಭವ ಮಂಟಪದ ಹೆಸರು ನಾಮಕರಣ ಮಾಡಬೇಕು ಎಂದು ಮನವಿ ಮಾಡಿದರು.

ವಿಧಾನಸಭೆಯ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಮಾತನಾಡಿ, ಇಂದು ಶಾಸಕಾಂಗ, ನ್ಯಾಯಾಂಗ, ಕಾರ್ಯಾಂಗ ಹಾಗೂ ಪ್ರತಿಕಾರಂಗ ಆತ್ಮಾವಲೋಕನ ಮಾಡಿಕೊಳ್ಳಬೇಕಾಗಿದೆ ಎಂದರು. ವಿಶ್ವದಲ್ಲಿ ಭಾರತದ ಪ್ರಜಾಪ್ರಭುತ್ವ ವ್ಯವಸ್ಥೆಗೆ ಗೌರವವಿದೆ. ಅದನ್ನು ಮತ್ತಷ್ಟು ಗಟ್ಟಿಗೊಳಿಸಬೇಕಾಗಿದೆ, ಡಾ.ಬಿ.ಆರ್.ಅಂಬೇಡ್ಕರ್ ಅವರು ನೀಡಿದ ಸಂವಿಧಾನ ಬದ್ಧ ಶಾಸಕಾಂಗ ಸಂಸ್ಥೆಗಳ ಉತ್ತರದಾಯಿತ್ವ ಹೆಚ್ಚಿಸಬೇಕಾಗಿದೆ ಎಂದರು.

ಜನರಿಂದ-ಜನರಿಗಾಗಿ ಜನರಿಗೋಸ್ಕರ ಪ್ರಜಾಪ್ರಭುತ್ವ ಇರಬೇಕು ಮುಂದಿನ ಚುನಾವಣೆ ಗೆಲ್ಲುವ ದೃಷ್ಠಿಯಿಂದ ಶಾಸಕಾಂಗ ವ್ಯವಸ್ಥೆಯಲ್ಲಿರುವವರು ಯೋಚನೆ ಮಾಡದೆ ಜನಕಲ್ಯಾಣಕ್ಕೆ ಯೋಚಿಸಬೇಕು ಎಂದರು.

ವಿಧಾನಸಭೆಯ ಕಾರ್ಯದರ್ಶಿ ವಿಶಾಲಾಕ್ಷಿ ಸ್ವಾಗತಿಸಿದರು. ಕೊನೆಯಲ್ಲಿ ವಿಧಾನ ಪರಿಷತ್ ಕಾರ್ಯದರ್ಶಿ ಕೆ.ಆರ್.ಮಹಾಲಕ್ಷ್ಮೀ ವಂದಿಸಿದರು. ಶಂಕರ ಪ್ರಕಾಶ ಕಾರ್ಯಕ್ರಮ ನಿರೂಪಿಸಿದರು. ಆರಂಭದಲ್ಲಿ ಚಿನ್ಮಯಿ ಪ್ರಾರ್ಥಿಸಿದರು.

**ಕಾಂಗ್ರೆಸ್ ಬಹಿಷ್ಕಾರ :** ಲೋಕಸಭೆ ಸ್ಪೀಕರ್ ಓಂ ಬಿರ್ಲಾ ಅವರು ಜಂಟಿ ಅಧಿವೇಶನವನ್ನುದ್ದೇಶಿಸಿ ಭಾಷಣ ಮಾಡುವ ಕಾರ್ಯಕ್ರಮವನ್ನು ಕಾಂಗ್ರೆಸ್ ಬಹಿಷ್ಕರಿಸಿತು. ಯಾವೊಬ್ಬ ಕಾಂಗ್ರೆಸ್ ಸದಸ್ಯರು ಸಹ ಈ ಕಾರ್ಯಕ್ರಮದಲ್ಲಿ ಭಾಗವಹಿಸದೆ ತಮ್ಮ ನಿನ್ನೆಯ ನಿರ್ಧಾರದಂತೆ ಇಂದು ಪಾಲ್ಗೊಳ್ಳಲಿಲ್ಲ. ಆದರೆ, ಮತ್ತೊಂದೆಡೆ ಜೆಡಿಎಸ್ ಈ ಕಾರ್ಯಕ್ರಮದಲ್ಲಿ ಭಾಗವಹಿಸಿತ್ತು.

**ಕನ್ನಡ ಧ್ವಜ ಪ್ರದರ್ಶನ :** ಓಂ ಬಿರ್ಲಾ ಭಾಷಣ ಹಿಂದಿಯಲ್ಲಿ ಆರಂಭಿಸುತ್ತಿದ್ದಂತೆಯೇ ಜೆಡಿಎಸ್‌ನ ಅನ್ನದಾನಿ ಏರಿದ ಧ್ವನಿಯಲ್ಲಿ ತಮ್ಮ ಅಸಮಾಧಾನ ವ್ಯಕ್ತಪಡಿಸಿದರು. ಕನ್ನಡ ಧ್ವಜ ಪ್ರದರ್ಶಿಸಿದ ಅವರು ಕನ್ನಡದಲ್ಲಿ ಭಾಷಣ ಮಾಡುವಂತೆ ಒತ್ತಾಯಿಸಿ ಗಮನ ಸೆಳೆದರೂ ಸಹ ಓಂ ಬಿರ್ಲಾ ಅವರ ಹಿಂದಿ ಭಾಷಣ ಮುಂದುವರೆಯಿತು.

# ಬಿಎಸ್‌ವೈಗೆ ಅತ್ಯುತ್ತಮ ಶಾಸಕ ಪ್ರಶಸ್ತಿ



ಯಾದಗಿರಿ ಎಕ್ಸ್‌ಪ್ರೆಸ್

ಬೆಂಗಳೂರು: ಬಿಜೆಪಿ ನಾಯಕ ಮತ್ತು ಶಿಕಾರಿಪುರ ಶಾಸಕ ಬಿ.ಎಸ್. ಯಡಿಯೂರಪ್ಪ ಅವರು ಅತ್ಯುತ್ತಮ ಶಾಸಕ ಪ್ರಶಸ್ತಿಗೆ ಪಾತ್ರರಾಗಿದ್ದಾರೆ. ಇದೇ ಮೊದಲ ಬಾರಿಗೆ ಈ ಪ್ರಶಸ್ತಿಯನ್ನು ನೀಡಲಾಗುತ್ತಿದ್ದು, ಚೊಚ್ಚಲ ಪ್ರಶಸ್ತಿ ಯಡಿಯೂರಪ್ಪ ಅವರಿಗೆ ಲಭಿಸಿದೆ.

ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಮತ್ತು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರ ಸಮ್ಮುಖದಲ್ಲಿ ವಿಧಾನಸಭೆಯ ಜಂಟಿ ಅಧಿವೇಶನದಲ್ಲಿ ವಿಧಾನಸಭಾ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಈ ಘೋಷಣೆ ಮಾಡಿದರು. ಸ್ಪೀಕರ್ ಕಾಗೇರಿ ನೇತೃತ್ವದ, ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಕಾನೂನು ಸಚಿವ ಜೆಸಿ ಮಾಧುಸ್ವಾಮಿ, ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ ಮತ್ತು ಹಿರಿಯ ಕಾಂಗ್ರೆಸ್ ಶಾಸಕ ಆರ್.ವಿ.ದೇಶಪಾಂಡೆ ಸದಸ್ಯರಾಗಿರುವ ಸಮಿತಿಯು, 4 ಬಾರಿ ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿರುವ, 8 ಬಾರಿ ಶಾಸಕರಾಗಿರುವ ಯಡಿಯೂರಪ್ಪ ಅವರನ್ನು ಪ್ರಶಸ್ತಿಗೆ ಆಯ್ಕೆ ಮಾಡಿತು.

'ಪ್ರಶಸ್ತಿಗೆ ನಾವು ಹಲವು ಹೆಸರನ್ನು ಪರಿಶೀಲಿಸಿದೆವು. ಆದರೆ, ಆಯ್ಕೆ ಕ್ಲಿಷ್ಟಕರವಾಗಿತ್ತು. ಯಡಿಯೂರಪ್ಪನವರ ಆಯ್ಕೆಯು ಸರ್ವಾನುಮತದಿಂದ ಕೂಡಿದೆ,' ಎಂದು ಕಾಗೇರಿ ಹೇಳಿದರು. 'ಅತ್ಯುತ್ತಮ ಶಾಸಕ ಪ್ರಶಸ್ತಿ'ಯನ್ನು ಪ್ರತಿ ವರ್ಷ ನೀಡಲಾಗುವುದು ಎಂದು ಕಾಗೇರಿ ಹೇಳಿದರು.